ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ : ಇಡಿ/ಕೆಇಎ/ನೇ.ವಿ/15/2026 ದಿನಾಂಕ: 02.10.2026

**ಪೊಲೀಸ್ ಇಲಾಖೆಯಿಂದ ಅಧಿಸೂಚಿಸಲಾದ ಉಳಿಕೆ ಮೂಲ ವೃಂದ ಮತ್ತು ಕಲ್ಯಾಣ ಕರ್ನಾಟಕ ವೃಂದದ KSRP/KSISF/IRB ಪೊಲೀಸ್ ಕಾನ್ಸ್ ಟೇಬಲ್ ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯ ಘಟಕವಾರು ತಾತ್ಕಾಲಿಕ ಪಟ್ಟಿ ಪ್ರಕಟಿಸಿರುವ ಬಗ್ಗೆ.**

ಅಧಿಸೂಚನೆ ಸಂಖ್ಯೆ: 04/ನೇಮಕಾತಿ-5(ಎ)/2026-27(ಆರ್.ಪಿ.ಸಿ) ದಿನಾಂಕ: 19.06.2026
ಅಧಿಸೂಚನೆ ಸಂಖ್ಯೆ: 04/ನೇಮಕಾತಿ-5 (ಬಿ)/2026-27(ಕೆ.ಕೆ) ದಿನಾಂಕ: 19.06.2026

*****

ಕರ್ನಾಟಕ ಪರೀಕ್ಷಾ ಪ್ರಾಧಿಕಾರಿದಂದ ಉಳಿಕೆ ಮೂಲ ವೃಂದ ಮತ್ತು ಕಲ್ಯಾಣ ಕರ್ನಾಟಕ ವೃಂದದ KSRP/KSISF/IRB ಪೊಲೀಸ್ ಕಾನ್ಸ್‌ಟೇಬಲ್ ನೇಮಕಾತಿ ಸಂಬಂಧ ದಿನಾಂಕ 20.09.2026 ರಂದು ನಡೆದ ಸ್ಪರ್ಧಾತ್ಮಕ ಪರೀಕ್ಷೆಗಳ ಕೀ ಉತ್ತರಗಳನ್ನು ದಿನಾಂಕ 21.09.2026 ರಂದು ಪ್ರಕಟಿಸಿ ದಿನಾಂಕ 23.09.2026 ರ ಬೆಳಿಗ್ಗೆ 10.30 ರವರೆಗೆ ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ನೀಡಲಾಗಿತ್ತು.

ಅದರಂತೆ ಅಭ್ಯರ್ಥಿಗಳಿಂದ ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರ ಮೂಲಕ ಪರಿಶೀಲಿಸಿ ದಿನಾಂಕ: 25.09.2026 ರಂದು ಪರಿಷ್ಕೃತ ಕೀ ಉತ್ತರಗಳನ್ನು ಪ್ರಕಟಿಸಲಾಗಿರುತ್ತದೆ. ಸದರಿ ಪರಿಷ್ಕೃತ ಕೀ ಉತ್ತರಗಳನ್ವಯ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ತಾತ್ಕಾಲಿಕ ಫಲಿತಾಂಶವನ್ನು ಪ್ರಾಧಿಕಾರದ ವೆಬ್ ಸೈಟ್ ನಲ್ಲಿ ಪ್ರಕಟಿಸಿ ದಿನಾಂಕ 27.09.2026 ಸಂಜೆ 5.30 ರೊಳಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿತ್ತು.

ತಾತ್ಕಾಲಿಕ ಫಲಿತಾಂಶಕ್ಕೆ ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಶೀಲಿಸಿ, ವೃಂದವಾರು & ಜಿಲ್ಲಾ/ಘಟಕವಾರು ತಾತ್ಕಾಲಿಕ ಅಂಕಪಟ್ಟಿಯನ್ನು ದಿನಾಂಕ 02.10.2026 ರಂದು ಪ್ರಕಟಿಸಲಾಗಿದೆ. ಅಧಿಸೂಚನೆಯಲ್ಲಿ ತಿಳಿಸಿರುವಂತೆ ಶೂನ್ಯ ಹಾಗೂ ಶೂನ್ಯಕ್ಕಿಂತ ಕಡಿಮೆ ಅಂಕಗಳನ್ನು ಪಡೆದ ಅಭ್ಯರ್ಥಿಗಳನ್ನು ಹೊರತುಪಡಿಸಿದ ಅಭ್ಯರ್ಥಿಗಳ ಅಂತಿಮ ಅಂಕಪಟ್ಟಿಯನ್ನು ದಿನಾಂಕ 05.10.2026 ರಂದು ಪ್ರಕಟಿಸಿ ಪೊಲೀಸ್ ಇಲಾಖೆಗೆ ಸದರಿ ಅಂತಿಮ ಅಂಕಪಟ್ಟಿಯನ್ನು ಹಸ್ತಾಂತರಿಸಲಾಗುವುದು ಹಾಗೂ ನೇಮಕಾತಿ ಪ್ರಾಧಿಕಾರದಿಂದ ಜಿಲ್ಲಾ/ನಗರ/ಘಟಕವಾರು 1:5 ಪಟ್ಟಿಯನ್ನು ಪ್ರಕಟಿಸಿ ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಯನ್ನು ನಡೆಸಲು ಹಾಗೂ ನಿಯಮಾನುಸಾರ ಆಯ್ಕೆ ಪಟ್ಟಿ ಪ್ರಕಟಿಸಲು ಕ್ರಮವಹಿಸುವರು.

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in